ದಿನಾಂಕ 04.04.2026 ರಂದು ಸಾಕ್ಷಿಗೆ ಕ್ರಮಬದ್ದವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

**<u>ಪಾಟೀಸವಾಲುಃ ಅರ್ಜಿದಾರರ ಪರವಾಗಿ ಜಿಲ್ಲಾ ಸರ್ಕಾರಿ ವಕೀಲರಿಂದಃ</u>**

ನಿಶಾನೆ ಆರ್ 1 ರಿಂದ 8 ನ್ನು ಎಸ್‌ಎಲ್‌ಎಓ ಮುಂದೆ ಹಾಜರುಪಡಿಸಲು ನಿಮಗೇನಾದರೂ ತೊಂದರೆ ಇತ್ತೇ ಎಂಬ ಪ್ರಶ್ನೆಗೆ ಸಾಕ್ಷಿ ಇಲ್ಲ ಎಂದು ಉತ್ತರಿಸಿರುತ್ತಾರೆ. ಸಾಕ್ಷಿ ಸ್ವಯಂ ಹೇಳುತ್ತಾರೆ ಇ-ಖಾತಾ ಬರಲು ವಿಳಂಬವಾದ ಕಾರಣ ದಾಖಲಾತಿಯನ್ನು ಹಾಜರುಪಡಿಸಲು ಸಾಧ್ಯವಾಗಿರಲಿಲ್ಲ. ಇ-ಖಾತಾ ಮಾಡಲು ಅರ್ಜಿ ಸಲ್ಲಿಸಿದ್ದೇನೆ ಎಂಬ ಹಿಂಬರಹವನ್ನು ನಾನು ಭೂಸ್ವಾಧೀನಾಧಿಕಾರಿಗಳ ಸಮಕ್ಷಮ ಹಾಜರುಪಡಿಸಿದ್ದೆ.

ನ್ಯಾಯಾಲಯದಲ್ಲಿ ಠೇವಣಿ ಇಟ್ಟಂತಹ ಹಣವನ್ನು ಪಡೆಯುವ ಸಲುವಾಗಿ ದಾಖಲಾತಿಗಳನ್ನು ಸೃಷ್ಟಿಮಾಡಿ ಈಗ ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ ಎಂದರೆ ಸರಿಯಲ್ಲ. ಮುಖ್ಯವಿಚಾರಣೆಯಲ್ಲಿ ಹೇಳಿಕೊಂಡಂತಹ ವಿಚಾರಗಳೆಲ್ಲಾ ಸತ್ಯಕ್ಕೆ ದೂರವಾಗಿದ್ದು, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ.
(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಪಂಚಾಕ್ಷರಿ.ಎಂ.)
1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/
ವಿಶೇಷ ನ್ಯಾಯಾಧೀಶರು,
ರಾಮನಗರ.